ವಿದ್ಯುತ್ ಸ್ಥಾವರ ಸ್ಥಾಪನೆ

55 : (33)

ಡಾ: ಮಾಲಕರೆಡ್ಡಿ.ಎ.ಬಿ (ಯಾದಗಿರಿ)

ಅ) ಯಾದಗಿರಿ ಜಿಲ್ಲೆಯಲ್ಲಿ ನೀರಾವರಿ ಯೋಜನೆಗಳಿದ್ದು, ರೈತರು ಇವುಗಳನ್ನೇ ನಂಬಿರುವುದರಿಂದ ವಿದ್ಯುತ್ ಕೊರತೆಯಿಂದ ರೈತರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದರೆ, ಸಾಕಷ್ಟು ವಿದ್ಯುತ್ ಪೂರೈಸಲು ಕೈಗೊಂಡ ಕ್ರಮಗಳೇನು; ಯಾದಗಿರಿ ವಿಧಾನ ಸಭಾ ಕ್ಷೇತ್ರದಲ್ಲಿ ಹೊಸ ವಿದ್ಯುತ್ ಸ್ಟೇಷನ್ ಸ್ಥಾಪಿಸಲು ಸರ್ಕಾರ ಏನು ಕ್ರಮ ಕೈಗೊಂಡಿದೆ;

ಇ) ಬೀದರ್, ಗುಲ್ಬರ್ಗ, ಯಾದಗಿರಿ, ರಾಯಚೂರು, ಕೊಪ್ಪಳ ಜಿಲ್ಲೆಗಳಿಗೆ ಎಷ್ಟು ಮೆಗಾವ್ಯಾಟ್ ವಿದ್ಯುತ್ ಹಂಚಿಕೆ ಮಾಡಲಾಗಿದೆ (ಸಂಪೂರ್ಣ ವಿವರ ಒದಗಿಸುವುದು);

ಈ) ಯಾದಗಿರಿ ಜಿಲ್ಲೆಗೆ ನಿಗದಿ ಮಾಡಿದ ವಿದ್ಯುತ್ ಪೂರೈಕೆಯಾಗದೆ ರೈತರ ಭೂಮಿಗೆ ನೀರು ಹರಿಸಲು ತೊಂದರೆ ಯಾಗಿರುವುದನ್ನು ನಿವಾರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು;

ಉ) ಯಾದಗಿರಿ ವಿಧಾನಸಭಾ ಕ್ಷೇತ್ರದಲ್ಲಿ 6 ಬ್ರಿಜ್ ಕಂ ಬ್ಯಾರೇಜ್‌ಗಳಿವೆ. ಇವುಗಳನ್ನು ನಂಬಿ ಸಾಕಷ್ಟು ರೈತರು ಭೂಮಿಯಲ್ಲಿ ಹಣ ತೊಡಗಿಸಿದ್ದಾರೆ. ಬ್ಯಾಂಕ್‌ನಲ್ಲಿ ಸಾಲ ಮಾಡಿದ್ದಾರೆ. ವಿದ್ಯುತ್ ಸಮಸ್ಯೆಯಿಂದ ನೀರು ಪೂರೈಕೆಯಾಗದೇ ರೈತರು ತೊಂದರೆ ಅನುಭವಿಸುತ್ತಿದ್ದಾರೆ. ಇದರಿಂದ ರೈತರಿಗೆ ಮಾತ್ರವಲ್ಲದೆ ರಾಜ್ಯಕ್ಕೂ ಆರ್ಥಿಕ ಹಾನಿಯಾಗುತ್ತದೆಂಬುದು ಸರ್ಕಾರದ ಗಮನಕ್ಕೆ ಬಂದಿಲ್ಲವೇ;

ಊ) ಸರ್ಕಾರದ ಅವಧಿ ಮುಗಿಯುತ್ತಿದ್ದರೂ ಚುನಾವಣಾ ಪ್ರಣಾಳಿಕೆಯಲ್ಲಿ ಹೇಳಿದಂತೆ 24 ತಾಸು ವಿದ್ಯುತ್ ನೀಡಲು ಸರ್ಕಾರಕ್ಕೆ ಸಾಧ್ಯವಾಗಿಲ್ಲ. 4 ತಾಸಿನಷ್ಟು ವಿದ್ಯುತ್ ನೀಡದೇ ಇರುವುದು ರೈತರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಶ್ರೀ ಜಗದೀಶ್ ಶೆಟ್ಟರ್ (ಮುಖ್ಯಮಂತ್ರಿಗಳು)

ಅ) ಹೌದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಆ) ಯಾದಗಿರಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಸಮರ್ಪಕ ವಿದ್ಯುತ್ ಪೂರೈಕೆ ಮಾಡಲು ಖಾನಾಪುರ, ವಡಗೇರಾ ಹಾಗೂ ಯಾದಗಿರಿ ಪಟ್ಟಣಗಳಲ್ಲಿ 110 ಕೆ.ವಿ. ವಿದ್ಯುತ್ ಉಪ ಕೇಂದ್ರಗಳು ಈಗಾಗಲೇ ಕಾರ್ಯನಿರ್ವಹಿಸುತ್ತಿರುತ್ತವೆ.

ಯಾದಗಿರಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿನ ಕಡೆಚೂರಿನಲ್ಲಿ 33 ಕೆ.ವಿ. ವಿದ್ಯುತ್ ಉಪ ಕೇಂದ್ರವನ್ನು ಸ್ಥಾಪಿಸಲು ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿಯು ಉದ್ದೇಶಿಸಿದ್ದು, ಸದರಿ ಉಪ ಕೇಂದ್ರದ ಕಾಮಗಾರಿಯು ಪ್ರಗತಿಯಲ್ಲಿರುತ್ತದೆ.

ಇ) ಬೀದರ್, ಗುಲ್ಬರ್ಗ, ಯಾದಗಿರಿ, ರಾಯಚೂರು, ಕೊಪ್ಪಳ ಜಿಲ್ಲೆಗಳಿಗೆ ಹಂಚಿಕೆ ಮಾಡಲಾಗಿರುವ ವಿದ್ಯುತ್‌ನ ವಿವರಗಳು ಕೆಳಕಂಡಂತಿವೆ:

ಕ್ರಮ ಸಂಖ್ಯೆ	ಜಿಲ್ಲೆ	ವಿದ್ಯುತ್ ಹಂಚಿಕೆ (ಮೆ.ವ್ಯಾ.ಗಳಲ್ಲಿ)
1	ಬೀದರ್	110–140
2	ಗುಲ್ಬರ್ಗ	130–160
3	ಯಾದಗಿರಿ	70–80
4	ಕೊಪ್ಪಳ	130–150
5	ಬಳ್ಳಾರಿ	160–190
6	ರಾಯಚೂರು	140–180

ಈ) ಯಾದಗಿರಿ ಜಿಲ್ಲೆಗೆ ಸಮರ್ಪಕ ವಿದ್ಯುತ್ ಪೂರೈಕೆಗಾಗಿ ಜನವರಿ–2013ರ ತಿಂಗಳಿನಲ್ಲಿ 60 ರಿಂದ 100 ಮೆ.ವ್ಯಾ. ವಿದ್ಯುತ್ ಒದಗಿಸಲಾಗಿದ್ದು, ಜಿಲ್ಲೆಯ ಗ್ರಾಮೀಣ ಪ್ರದೇಶಗಳಿಗೆ ಪ್ರತಿದಿನ 6 ತಾಸು 3 ಫೇಸ್ ಮತ್ತು 8 ತಾಸು ಸಿಂಗಲ್ ಫೇಸ್ ವಿದ್ಯುತ್ ಸರಬರಾಜು ಮಾಡಲಾಗಿದೆ.

ಉ) ರಾಜ್ಯದಲ್ಲಿ ವಿದ್ಯುತ್ ಕೊರತೆ ತೀವ್ರವಾಗಿದ್ದು, ರೈತರ ಹಿತದೃಷ್ಟಿಯಿಂದ ರಾಜ್ಯ ಸರ್ಕಾರವು ಖಾಸಗಿ ವಿದ್ಯುತ್ ಉತ್ಪಾದಕರುಗಳಿಂದ

ಜೂನ್–2013 ರವರೆಗೆ ಪ್ರತಿದಿನ ಸರಾಸರಿ 1280 ಮೆ.ವ್ಯಾ.ಗಳಷ್ಟು ವಿದ್ಯುತ್ತನ್ನು ಖರೀದಿಸುತ್ತಿದೆ.

ಊ) ರಾಜ್ಯದಲ್ಲಿ ವಿದ್ಯುತ್ ಕೊರತೆ ತೀವ್ರವಾಗಿದ್ದು, ಲಭ್ಯವಿರುವ ವಿದ್ಯುತ್‌ಗೆ ಅನುಗುಣವಾಗಿ ಗುಲ್ಬರ್ಗ ವಿದ್ಯುತ್ ಸರಬರಾಜು ಕಂಪನಿಯ ವ್ಯಾಪ್ತಿಯ ಎಲ್ಲಾ ಗ್ರಾಮೀಣ ಪ್ರದೇಶಗಳಿಗೆ ಪ್ರಸ್ತುತ ಹಗಲಿನ ವೇಳೆಯಲ್ಲಿ 4 ತಾಸು ಹಾಗೂ ರಾತ್ರಿ ವೇಳೆಯಲ್ಲಿ 2 ತಾಸು 3 ಫೇಸ್‌ನಲ್ಲಿ ಹಾಗೂ 7 ರಿಂದ 8 ಗಂಟೆಗಳ ಕಾಲ ಸಿಂಗಲ್ ಫೇಸ್‌ನಲ್ಲಿ ವಿದ್ಯುತ್ ಸರಬರಾಜು ಮಾಡಲಾಗುತ್ತಿದೆ.

ಕಾಮಗಾರಿಯ ವಿಳಂಬ

42 : (207)

ಶ್ರೀ ಅಪ್ಪಾಜಿ @ ಚನ್ನಬಸವರಾಜ್ ಶಂಕರರಾವ್ ನಾಡಗೌಡ

ಅ) ಮುದ್ದೇಬಿಹಾಳದಲ್ಲಿ ರಸ್ತೆ ಸಾರಿಗೆ ಸಂಸ್ಥೆಯ ಬಸ್‌ನಿಲ್ದಾಣದ ಕಾಮಗಾರಿಯು ವಿಳಂಬದಿಂದ ನಡೆಯುತ್ತಿದ್ದು, ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿಳಂಬಕ್ಕೆ ಕಾರಣಗಳೇನು)

ಆ) ಹಾಗಿದ್ದಲ್ಲಿ, ಈ ಬಸ್‌ನಿಲ್ದಾಣದ ಕಾಮಗಾರಿಯನ್ನು ತ್ವರಿತವಾಗಿ ಪೂರ್ಣ ಗೊಳಿಸಲು ಸರ್ಕಾರಕ್ಕಿರುವ ತೊಂದರೆ ಗಳೇನು;

ಇ) ಸದರಿ ಕಾಮಗಾರಿಯು ಕಳಪೆ ಗುಣಮಟ್ಟದಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ಸರ್ಕಾರ ಗುತ್ತಿಗೆದಾರರ ಮೇಲೆ ಕ್ರಮ ತೆಗೆದುಕೊಂಡಿದೆಯೇ; ಹಾಗಿದ್ದಲ್ಲಿ, ಈ ಕಾಮಗಾರಿಯನ್ನು ಯಾವಾಗ ಪೂರ್ಣಗೊಳಿಸಲಾಗುವುದು?

ಶ್ರೀ ಆರ್.ಅಶೋಕ್ (ಮಾನ್ಯ ಉಪಮುಖ್ಯಮಂತ್ರಿಗಳು (ಗೃಹ ಮತ್ತು ಸಾರಿಗೆ))

ಅ ಮತ್ತು ಆ) ಬಂದಿದೆ

ಮುದ್ದೇಬಿಹಾಳ ಬಸ್ ನಿಲ್ದಾಣದ ಪಕ್ಕದಲ್ಲಿರುವ ಲೋಕೋಪಯೋಗಿ ಇಲಾಖೆಗೆ ಸೇರಿದ 38.5ಗುಂಟೆ ನಿವೇಶನವನ್ನು ಸಂಸ್ಥೆಗೆ ದಿನಾಂಕ:23.05.2012 ರಂದು ನೀಡಲಾಗಿದ್ದು, ಈ ನಿವೇಶನದಲ್ಲಿ 1966ರಲ್ಲಿ ನಿರ್ಮಾಣಗೊಂಡ ಹಳೆಯ ಶಡ್‌ಗಳನ್ನು ಹರಾಜು ಪ್ರಕ್ರಿಯೆ ನಂತರ ನೆಲ ಸಮ ಮಾಡಿ